**ಕರ್ನಾಟಕ ಸರ್ಕಾರ**
**ವಾಣಿಜ್ಯ ತೆರಿಗೆ ಇಲಾಖೆ**

**2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮದ ಪ್ರಕರಣ 59ರ ಉಪ ಪ್ರಕರಣ (4)ರ ಅಡಿ ವಾಣಿಜ್ಯ ತೆರಿಗೆಗಳ ಆಯುಕ್ತರು (ಕರ್ನಾಟಕ), ಬೆಂಗಳೂರು ಇವರ ನಡವಳಿಗಳು**

ಉಪಸ್ಥಿತರು: ಶ್ರೀ ರಿತ್ವಿಕ್ ಪಾಂಡೆ, ಭಾ.ಆ.ಸೇ.
**ವಾಣಿಜ್ಯ ತೆರಿಗೆಗಳ ಆಯುಕ್ತರು (ಕರ್ನಾಟಕ)**

ವಿಷಯ: 2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮದ ಪ್ರಕರಣ 59(4) ರನ್ವಯ ಒಳಗಿನ ಗುತ್ತಿಗೆ ಕಾಮಗಾರಿಗೆ ಅನ್ವಯವಾಗುವ ತೆರಿಗೆ ದರದ ಬಗ್ಗೆ ಸ್ಪಷ್ಟೀಕರಣ ಕುರಿತು.

ಉಲ್ಲೇಖ: ಮೆ: ಕೃತಿಕ ಎಂಟರ್‌ಪ್ರೈಸಸ್, ನಂ.17, ಎಂ.ಎಸ್.ಹೆಚ್ ಲೇಔಟ್, 2ನೇ ಹಂತ, 2ನೇ ಮುಖ್ಯ ರಸ್ತೆ, ಆನಂದನಗರ, ಬೆಂಗಳೂರು – 560 024 ಇವರ ದಿನಾಂಕ 11–03–2015ರ ಅರ್ಜಿ. (ಟಿನ್: 29151101316).

****

2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮಡಿಯಲ್ಲಿ ನೋಂದಣಿದಾರರಾದ ಮೆ: ಕೃತಿಕ ಎಂಟರ್‌ಪ್ರೈಸಸ್, ನಂ.17, ಎಂ.ಎಸ್.ಹೆಚ್ ಲೇಔಟ್, 2ನೇ ಹಂತ, 2ನೇ ಮುಖ್ಯ ರಸ್ತೆ, ಆನಂದನಗರ, ಬೆಂಗಳೂರು – 560 024 ಇವರು ಮೇಲ್ಕಂಡ ಅರ್ಜಿಯಲ್ಲಿ ಒಳಗಿನ ಗುತ್ತಿಗೆ ಕಾಮಗಾರಿಗೆ ಅನ್ವಯವಾಗುವ ತೆರಿಗೆ ದರದ ಬಗ್ಗೆ ಸ್ಪಷ್ಟೀಕರಣವನ್ನು ಕೋರಿರುತ್ತಾರೆ.

2. 2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಅಧಿನಿಯಮದ ಪ್ರಕರಣ 59ರ ಉಪ ಪ್ರಕರಣ (4)ರ ಮೇರೆಗೆ ವಾಣಿಜ್ಯ ತೆರಿಗೆ ಆಯುಕ್ತರು (ಕರ್ನಾಟಕ), ಬೆಂಗಳೂರು ಇವರು ತೆರಿಗೆಯ ನಿರ್ಧರಣೆ ಹಾಗೂ ರಾಜಸ್ವದ ಸಂಗ್ರಹಣೆ ಕಾರ್ಯದಲ್ಲಿ ಏಕರೂಪತೆಯನ್ನು ತರುವ ಉದ್ದೇಶಕ್ಕಾಗಿ, ಸದರಿ ಅಧಿನಿಯಮದಡಿಯಲ್ಲಿ ತೆರಿಗೆಗೆ ಒಳಪಡುವ ಸರಕುಗಳ ಸಂಬಂಧದಲ್ಲಿ ಈ ಅಧಿನಿಯಮದ ಅಡಿಯಲ್ಲಿ ಸಂದಾಯ ಮಾಡತಕ್ಕ ತೆರಿಗೆ ದರವನ್ನು ಸ್ಪಷ್ಟಪಡಿಸುವುದು ಅವಶ್ಯವೆಂದು ಅಥವಾ ಯುಕ್ತವೆಂದು ಭಾವಿಸಿದರೆ ಹಾಗೆ ಮಾಡಲು ಅಧಿಕಾರ ಹೊಂದಿದ್ದಾರೆ.

. . . 2)

3. ಈ ಹಿನ್ನೆಲೆಯಲ್ಲಿ ತೆರಿಗೆ ದರವನ್ನು ಈ ಕೆಳಕಂಡಂತೆ ಸ್ಪಷ್ಟಪಡಿಸಲಾಗಿದೆ.

**ಸ್ಪಷ್ಟೀಕರಣ ಆದೇಶ ಸಂಖ್ಯೆಸಿಎಲ್ಆರ್/ಸಿಆರ್.156/2014-15, ದಿ. 14-07-2015**

(1) ಕಟ್ಟಡದ ಒಳಗಿನ ಗುತ್ತಿಗೆ ಕಾಮಗಾರಿಗೆ 2003ರ ಕರ್ನಾಟಕ ಮೌಲ್ಯ ವರ್ಧಿತ ತೆರಿಗೆ ಕಾಯ್ದೆಯ ಕಲಂ 15 ರನ್ವಯ ರಾಜಿ ತೆರಿಗೆ ಪದ್ಧತಿಯನ್ನು ಆಯ್ಕೆ ಮಾಡಿಕೊಂಡ ಗುತ್ತಿಗೆದಾರರು ದಿನಾಂಕ 31-03-2006ರ ಅಧಿಸೂಚನೆ ಸಂಖ್ಯೆ ಎಫ್ ಡಿ 116 ಸಿಎಸ್ಎಲ್ 2006(13) ರನ್ವಯ ಒಟ್ಟು ಗುತ್ತಿಗೆ ಹಣದ ಮೇಲೆ ಶೇ. 4 ರಂತೆ ತೆರಿಗೆ ಪಾವತಿಗೆ ಬಾಧ್ಯಸ್ತರಿರುತ್ತಾರೆ.

(2) ರಾಜಿ ತೆರಿಗೆ ಪದ್ಧತಿಯನ್ನು ಆಯ್ಕೆ ಮಾಡಿಕೊಳ್ಳದ ಗುತ್ತಿಗೆದಾರರು ಕಟ್ಟಡದ ಒಳಗಿನ ಗುತ್ತಿಗೆ ಕಾಮಗಾರಿಗೆ 2003ರ ಕರ್ನಾಟಕ ಮೌಲ್ಯವರ್ಧಿತ ತೆರಿಗೆ ಕಾಯ್ದೆಯ ಆರನೇ ಅನುಸೂಚಿಯ ಕ್ರಮ ಸಂಖ್ಯೆ 23 ರನ್ವಯ ಮತ್ತು 2005ರ ಕರ್ನಾಟಕ ಮೌಲ್ಯ ವರ್ಧಿತ ತೆರಿಗೆ ಅಧಿನಿಯಮಗಳ ನಿಯಮ 3(2)ರ ಪ್ರಕಾರ ಲೆಕ್ಕ ಹಾಕಿದ ತೆರಿಗೆದಾಯಕ ವಹಿವಾಟಿನ ಮೇಲೆ, ಹೂಡುವಳಿ ತೆರಿಗೆ ಪ್ರಯೋಜನಕ್ಕೊಳಪಟ್ಟು ಶೇ. 14.5ರ ದರದಲ್ಲಿ ಮೌಲ್ಯ ವರ್ಧಿತ ತೆರಿಗೆ ಪಾವತಿಗೆ ಬಾಧ್ಯಸ್ತರಿರುತ್ತಾರೆ ಎಂದು ಈ ಮೂಲಕ ಸ್ಪಷ್ಟೀಕರಸಲಾಗಿದೆ.

(ರಿತ್ವಿಕ್ ಪಾಂಡೆ),
ವಾಣಿಜ್ಯ ತೆರಿಗೆಗಳ ಆಯುಕ್ತರು,
(ಕರ್ನಾಟಕ), ಬೆಂಗಳೂರು.

ವಾಣಿಜ್ಯ ತೆರಿಗೆಗಳ ಆಯುಕ್ತರು
ಕರ್ನಾಟಕ, ಬೆಂಗಳೂರು